JANUARY 28,2025

ALL INDIA RADIO- DHARWAD

PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ವಿವೇಕಾದಿತ್ಯ ಕನಿಯಾಲ

<><><>

ಸ್ವತಂತ್ರ ಭಾರತದ ಮೊದಲ ಸೇನಾ ದಂಡನಾಯಕರಾಗಿದ್ದ, ಕೊಡಗಿನ, ಜನರಲ್, ಫೀಲ್ಡ್ ಮಾರ್ಷಲ್ ಕೆ.ಎಂ ಕಾರ್ಯಪ್ಪ ಅವರ ಜನ್ಮ ವಾರ್ಷಿಕ ದಿನವಿಂದು, ದೇಶಕ್ಕಾಗಿ ಅವರು ನೀಡಿದ ಅಪ್ರತಿಮ ಸೇವೆಯನ್ನು ಸ್ಮರಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಸೇರಿದಂತೆ ಗಣ್ಯರು, ಜನರಲ್ ಕಾರ್ಯಪ್ಪ ಅವರ ಕೊಡುಗೆಗಳನ್ನು ಶ್ಲಾಘಿಸಿ, ಗೌರವಪೂರ್ವಕ ನಮನಗಳನ್ನು ಸಲ್ಲಿಸಿದ್ದಾರೆ.

<><><>

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಪಿ.ಎಂ ಸೂರ್ಯಘರ್, ಮುಫ್ತ್ ಬಿಜ್ಲಿ ಯೋಜನೆಯು ದೇಶದ ಹಸಿರು ಇಂಧನ ಕ್ಷೇತ್ರದ ಮಹತ್ವದ ಹೆಜ್ಜೆಯಾಗಿದೆ. ಕೇಂದ್ರ ಸರ್ಕಾರದ ಸಬ್ಸಿಡಿ ಹಣವನ್ನು ಬಳಸಿಕೊಂಡು, ಮನೆ ತಾರಸಿನ ಮೇಲೆ ಸೌರ ಫಲಕಗಳನ್ನು ಅಳವಡಿಸಿರುವ, ಧಾರವಾಡದ ಸೂರ್ಯ ಘರ್ ಯೋಜನೆಯ ಫಲಾನುಭವಿ ಜಿ. ವಿ ಪುರಾಣಿಕ್ ಅವರು ಸೌರ ವಿದ್ಯುತ್ ಶಕ್ತಿಯ ಪ್ರಯೋಜನ ಪಡೆಯುತ್ತಿದ್ದು, ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಬೈಟ್: ಜಿ.ವಿ ಪುರಾಣಿಕ್ 33 ಸೆಕೆಂದುಗಳು

<><><>

ಪಿ.ಎಂ ಸೂರ್ಯಘರ್ ಯೋಜನೆಯ ಬಗ್ಗೆ ಸಾಮಾಜಿಕ ಜಾಲತಾಣ, ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಹಸಿರು ಇಂಧನ ಬಳಕೆ ಕ್ಷೇತ್ರದಲ್ಲಿ ದೇಶವು ದಿಟ್ಟ ಹೆಜ್ಜೆಗಳನ್ನು ಇರಿಸಿದ್ದು, ಪ್ರಗತಿ ಸಾಧಿಸುತ್ತಿದೆ ಎಂದಿದ್ದಾರೆ.

<><><>

ಬೆಂಗಳೂರಿನ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ ಹಾಗೂ ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರದ ಸಹಯೋಗದಲ್ಲಿ, "ಶಕ್ತಿ ಸಂರಕ್ಷಣಾ ದಿನಾಚರಣೆ" ಆಯೋಜಿತವಾಗಿತ್ತು. ವಿಚಾರ ಮಂಡಿಸಿದ, ಧಾರವಾಡ ರಾಯಾಪುರದ, ಕೆ.ಎಲ್.ಇ. ಪ್ರೌಢ ಶಾಲೆ ವಿದ್ಯಾರ್ಥಿನಿ, ಅವನಿ ಎ.ಎನ್. ಪ್ರಥಮ ಸ್ಥಾನ ಹಾಗೂ ಕೆಲಗೇರಿಯ ಕೆ.ಇ. ಬೋರ್ಡ್ಸ್ ಸಿ.ಬಿ.ಎಸ್.ಇ. ಪ್ರೌಢ ಶಾಲೆಯ ನಿಧಿ ಲದ್ದಡ್ ದ್ವಿತೀಯ ಸ್ಥಾನ ಹಾಗೂ, ಲಕಮನಹಳ್ಳಿಯ ಅಟಲ್ ಬಿಹಾರಿ ವಾಜಪೇಯಿ ಪ್ರೌಢ ಶಾಲೆಯ ಆರ್.ಎಚ್. ಜ್ಯೋತಿ ತೃತೀಯ ಪುರಸ್ಕಾರ ಪಡೆದರು. ಧಾರವಾಡ ಎಸ್.ಡಿ.ಎಂ. ಅಭಿಯಾಂತ್ರಿಕ ಮಹಾವಿದ್ಯಾಲಯದ ಪ್ರಾಚಾರ್ಯ ರಮೇಶ ಚಕ್ರಸಾಲಿ, ವಿಜೇತರನ್ನು ಗೌರವಿಸಿದರು.

<><><>

ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘವು ಇಂದು ಸಂಜೆ 5 ಗಂಟೆ 15 ನಿಮಿಷಕ್ಕೆ, ರಾ.ಹ ದೇಶಪಾಂಡೆ ಸಭಾಭವನದಲ್ಲಿ ಡಾಕ್ಟರ್ ಎಸ್.ಎಂ ವೃಷಭೇಂದ್ರಸ್ವಾಮಿ ಸಂಸ್ಮರಣಾ ದತ್ತಿ ಕಾರ್ಯಕ್ರಮ ಆಯೋಜಿಸಿದೆ. ವಿಶ್ರಾಂತ ಪ್ರಾಧ್ಯಾಪಕ ಡಾಕ್ಟರ್ ಜಿ.ಎಂ ಹೆಗಡೆ ಅವರು ಕನ್ನಡ ಸಾಹಿತ್ಯದಲ್ಲಿ 'ಅಲ್ಲಮ ಪ್ರಭುದೇವ' ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ.

<><><>

'ಅಂಬಿಕಾತನಯದತ್ತ ರಾಷ್ಟ್ರೀಯ ಪ್ರಶಸ್ತಿ'ಯನ್ನು, ಹಿರಿಯ ಲೇಖಕಿ ವೀಣಾ ಶಾಂತೇಶ್ವರ ಹಾಗೂ ಹಿರಿಯ ವಿಮರ್ಶಕ ಎಸ್.ಜಿ.ಸಿದ್ಧರಾಮಯ್ಯ ಅವರಿಗೆ, ಹಿರಿಯ ಸಾಹಿತಿ ಸಿದ್ಧಲಿಂಗ ಪಟ್ಟಣಶೆಟ್ಟಿ ಅವರು ಪ್ರದಾನ ಮಾಡಲಿದ್ದಾರೆ.

ವರಕವಿ ದ.ರಾ. ಬೇಂದ್ರೆ ಅವರ, 129ನೇ ಜನ್ಮದಿನವಾದ, 31ನೇ ತಾರೀಖು ಶುಕ್ರವಾರ, ಸಂಜೆ 5 ಗಂಟೆಗೆ, ಧಾರವಾಡದ ಸಾಧನಕೇರಿಯ, ಬೇಂದ್ರೆ ಭವನದಲ್ಲಿ, ಪ್ರಶಸ್ತಿ ಪ್ರದಾನ ಸಮಾರಂಭ ಜರುಗಲಿದೆ.

<><><>

ಕೇಂದ್ರ ರಸ್ತೆ ನಿಧಿ ಯೋಜನೆಯಡಿ, ಗದಗ ತಾಲೂಕಿನ ಹಿರೇಹಂದಿಗೋಳ ಗ್ರಾಮದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ರಾಜ್ಯ ಪ್ರವಾಸೋದ್ಯಮ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಅವರು ಭೂಮಿ ಪೂಜೆ ನೆರವೇರಿಸಿದರು. ರಸ್ತೆ ಅಭಿವೃದ್ಧಿಗೆ ಸರ್ಕಾರ ಸಮರ್ಪಕ ಅನುದಾನ ಒದಗಿಸಿದೆ. ಮುಂದಿನ ಮೂರು ತಿಂಗಳೊಳಗಾಗಿ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಗುಣಮಟ್ಟಕ್ಕೆ ಆದ್ಯತೆ ನೀಡಿ ಪೂರ್ಣಗೊಳಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸಚಿವರು ನಿರ್ದೇಶನ ನೀಡಿದರು.

<><><>

ಧಾರವಾಡದ ದೃಷ್ಟಿ ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ಆಯೋಜಿಸಿದ್ದ, ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆಯನ್ನು, ಹಿರಿಯ ಸಿವಿಲ್ ನ್ಯಾಯಾಧೀಶ ಪರಶುರಾಮ ದೊಡ್ಡಮನಿ ಉದ್ಘಾಟಿಸಿದರು.

<><><>

ಗದಗ ಜಿಲ್ಲೆ ಆಯುಷ್ ಇಲಾಖೆ, ಕಾನೂನು ಸೇವಾ ಪ್ರಾಧಿಕಾರದ ಸಹಯೋಗದಲ್ಲಿ, ನ್ಯಾಯವಾದಿಗಳಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿತ್ತು.

<><><>

ಚಿಕ್ಕಬಳ್ಳಾಪುರ ಶಾಸಕ ಪ್ರದೀಪ ಈಶ್ವರ, ಇಂದು ಬೆಳಗ್ಗೆ 7 ರಿಂದ 9 ಗಂಟೆ ವರೆಗೆ, ಕಮ್ಮಗುಟ್ಟಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ, ಸಾರ್ವಜನಿಕರ ಅಹವಾಲು ಆಲಿಸದರು.

<><><>

ಚಿಕ್ಕಮಕ್ಕಳಿಗೆ ಪ್ರಾರಂಭದಿಂದಲೇ ಉತ್ತಮ ಶಿಕ್ಷಣ ದೊರೆಯಬೇಕು ಎಂದು ರಾಜ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಅವರು ಹೇಳಿದರು. ಗದಗ ನಗರದಲ್ಲಿ ಎರಡು ಕೋಟಿ ರೂಪಾಯಿ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಲಾಗುತ್ತಿರುವ ನಾಲ್ಕು ಅಂಗನವಾಡಿ ಕಟ್ಟಡಗಳ ಭೂಮಿಪೂಜೆ ನೆರವೇರಿಸಿ ಸಚಿವರು ಮಾತನಾಡಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>